ದಿನಾಂಕಃ **24-09-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದ,**

6) ನಾನು ಎದುರುದಾರರ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದಾಗ ವೇತನವನ್ನು ನನ್ನ ಬ್ಯಾಂಕಿನ ಖಾತೆಗೆ ವರ್ಗಾವಣೆ ಮಾಡುತ್ತಿದ್ದರು ಎಂದರೆ ಸರಿಯಲ್ಲ. ನನಗೆ ಹೆಚ್ ಡಿ ಎಫ್ ಸಿ ಬ್ಯಾಂಕಿನಲ್ಲಿ ಖಾತೆ ಇರುತ್ತದೆ ಎಂದರೆ ಸರಿಯಲ್ಲ. ದಿಃ 31-07-2021 ರಂದು ನನ್ನ ಖಾತೆಗೆ ಎರಡು ಸಾವಿರ ವರ್ಗಾವಣೆ ಆಗಿರುತ್ತದೆ ಎಂದರೆ ಸರಿಯಲ್ಲ. ದಿಃ 01-08-2021 ರಲ್ಲಿ ಹತ್ತು ಸಾವಿರ ಹಣವನ್ನು ವರ್ಗಾವಣೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ದಿಃ 13-08-2021 ರಲ್ಲಿ ನನ್ನ ಖಾತೆಗೆ ರೂ 17,440-00 ವರ್ಗಾವಣೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಖಾತೆಗೆ ವೇತನ ಹಣ ವರ್ಗಾವಣೆ ಆಗಿದ್ದರೂ ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಅರ್ಜಿಯಲ್ಲಿ ನನಗೆ ಮಾಸಿಕ ವೇತನ 15 ಸಾವಿರ ಎಂದು ಸುಳ್ಳು ಹೇಳಿರುತ್ತೇನೆ ಎಂದರೆ ಸರಿಯಲ್ಲ.

7) ಇ ಎಸ್ ಐ ಆಸ್ಪತ್ರೆಯವರು ಹೆಚ್ಚಿನ ಚಿಕಿತ್ಸೆಗಾಗಿ ನನ್ನನ್ನು ಬೇರೆ ಕಡೆ ಕಳುಹಿಸಿದ್ದರು ಎಂದರೆ ಸರಿಯಲ್ಲ. ನನ್ನ ಆಸ್ಪತ್ರೆ ಖರ್ಚನ್ನು ಇ ಎಸ್ ಐ ಆಸ್ಪತ್ರೆಯವರು ಭರಿಸಿರುತ್ತಾರೆ ಎಂದರೆ ಸರಿಯಲ್ಲ. ದಿಃ 23-08-2021 ರಂದು ನಾನು ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿರುತ್ತೇನೆ ಎಂದರೆ ಸರಿ. ಇ ಎಸ್ ಐ ಆಸ್ಪತ್ರೆಯವರು ನನ್ನ ಆರೋಗ್ಯದ ಸ್ಥಿತಿ ಬಗ್ಗೆ ದಾಖಲೆ ನೀಡಿರುತ್ತಾರೆ ಎಂದರೆ ಸರಿ. ಸದರಿ ದಾಖಲೆಯನ್ನು ನಾನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ.

8) ದಿಃ 23-08-2021 ರಂದು ಆಸ್ಪತ್ರೆಯಿಂದ ಬಿಡುಗಡೆ ಆದ ನಂತರ ನಾನು ನಾಲ್ಕು ಚಕ್ರ ಸರಕು ವಾಹನವನ್ನು ಖರೀದಿ ಮಾಡಿದ್ದೇನೆ ಎಂದರೆ ಸಾಕ್ಷಿಯು ನನ್ನ ಪತ್ನಿ ಯ ಹೆಸರಿನಲ್ಲಿ ಖರೀದಿ ಮಾಡಿರುತ್ತೇನೆ ಎಂದು ನುಡಿಯುತ್ತಾರೆ. ಸದರಿ ವಾಹನ ನಾನು ಚಾಲನೆ ಮಾಡುತ್ತಿದ್ದಾಗ ಅಪಘಾತ ಆಗಿರುತ್ತದೆ ಎಂದರೆ ಸರಿಯಲ್ಲ. ಸದರಿ ಅಪಘಾತದಿಂದ ನನಗೆ ಗಾಯಗಳಾಗಿರುತ್ತವೆ ಎಂದರೆ ಸರಿಯಲ್ಲ. ಸಾಕ್ಷಿ ಸ್ವತಃ ನಾನು ದ್ವಿಚಕ್ರದಿಂದ ಬಿದ್ದು

ಗಾಯಗಳಾಗಿರುತ್ತವೆ ಎಂದು ನುಡಿಯುತ್ತಾರೆ. ನಾನು ಸ್ವತಃ ದ್ವಿಚಕ್ರ ವಾಹನದಿಂದ ಬಿದ್ದು ಗಾಯಗಳನ್ನು ಮಾಡಿಕೊಂಡಿದ್ದು ಅದರ ಸಂಬಂಧ ದಾಖಲೆ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಅಪಘಾತದ ಪರಿಹಾರದ ಹಣ ಪಡೆಯುವ ಸಲುವಾಗಿ ಇ ಎಸ್ ಐ ಇಲಾಖೆಗೆ ಅರ್ಜಿ ನೀಡಿರುತ್ತೇನೆ. ಸದರಿ ಅರ್ಜಿಯನ್ನು ಪರಿಗಣಿಸಿರುವುದಿಲ್ಲ. ಈ ಸಂಬಂಧವಾಗಿ ಇ ಎಸ್ ಐ ರವರು ಯಾವುದೇ ಹಿಂಬರಹ ನೀಡಿರುವುದಿಲ್ಲ.

9) ನನಗೆ ಯಾವುದೇ ಅಪಘಾತವಾಗದೇ ಇರುವುದರಿಂದ ಇ ಎಸ್ ಐ ಇಲಾಖೆಗೆ ಯಾವುದೇ ಅರ್ಜಿಯನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಕಾಲಮಿತಿ ಅವಧಿ ಮೀರಿ ಈ ಅರ್ಜಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಅರ್ಜಿಯಲ್ಲಿ ಕೇಳಿರುವಷ್ಟು ಪರಿಹಾರ ಪಡೆಯಲು ಅರ್ಹನಲ್ಲ ಎಂದರೆ ಸರಿಯಲ್ಲ. ನಾನು ಎದುರುದಾರರಿಂದ ಅಕ್ರಮ ಲಾಭ ಪಡೆಯುವ ಉದ್ದೇಶದಿಂದ ಸುಳ್ಳು ಅರ್ಜಿ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ